ಶಾಸನ ರಚನೆ

ವಿಧೇಯಕಗಳನ್ನು ಮಂಡಿಸುವುದು

1. ಕರ್ನಾಟಕ ಅಂಗಡಿಗಳು ಮತ್ತು ವಾಣಿಜ್ಯ ಸಂಸ್ಥೆಗಳ (ತಿದ್ದುಪಡಿ) ವಿಧೇಯಕ, 2005

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ತನ್ವೀರ್ ಸೇಠ್ (ಕಾರ್ಮಿಕ ಮತ್ತು ಹಜ್ ರಾಜ್ಯ ಸಚಿವರು): ಮಾನ್ಯ ಅಧ್ಯಕ್ಷರೆ, 2005ನೇ ಸಾಲಿನ ಕರ್ನಾಟಕ ಅಂಗಡಿಗಳು ಮತ್ತು ವಾಣಿಜ್ಯ ಸಂಸ್ಥೆಗಳ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾವ ಏನೆಂದರೆ.

"2005ನೇ ಸಾಲಿನ ಕರ್ನಾಟಕ ಅಂಗಡಿಗಳೂ ಮತ್ತು ವಾಣಿಜ್ಯ ಸಂಸ್ಥೆಗಳ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ತನ್ವೀರ್ ಸೇಠ್ (ಕಾರ್ಮಿಕ ಮತ್ತು ಹಜ್ ರಾಜ್ಯ ಸಚಿವರು): ಮಾನ್ಯ ಅಧ್ಯಕ್ಷರೆ, 2005ನೇ ಸಾಲಿನ ಕರ್ನಾಟಕ ಅಂಗಡಿಗಳು ಮತ್ತು ವಾಣಿಜ್ಯ ಸಂಸ್ಥೆಗಳ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇವೆ.

ಅಧ್ಯಕ್ಷರು:– ವಿಧೇಯಕವನ್ನು ಮಂಡಿಸಲಾಗಿದೆ.

2. ಕೈಗಾರಿಕಾ ನಿಯೋಜನೆ (ಸ್ಥಾಯಿ ಆದೇಶಗಳು) (ಕರ್ನಾಟಕ ತಿದ್ದುಪಡಿ) ವಿಧೇಯಕ, 2005 ಮಂಡನೆಗೆ ಅನುಮತಿ ಕೋರಿಕೆ

ಶ್ರೀ ತನ್ವೀರ್ ಸೇಠ್ (ಕಾರ್ಮಿಕ ಮತ್ತು ಹಜ್ ರಾಜ್ಯ ಸಚಿವರು): ಮಾನ್ಯ ಅಧ್ಯಕ್ಷರೇ, 2005ನೇ ಸಾಲಿನ ಕೈಗಾರಿಕಾ ನಿಯೋಜನೆ (ಸ್ಥಾಯಿ ಆದೇಶಗಳೂ) (ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುತ್ತೇನೆ.

ಅಧ್ಯಕ್ಷರು:– ಪ್ರಸ್ತಾವ ಏನೆಂದರೆ

"2005ನೇ ಸಾಲಿನ ಕೈಗಾರಿಕಾ ನಿಯೋಜನೆ (ಸ್ಥಾಯಿ ಆದೇಶಗಳೂ)(ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ತನ್ವೀರ್ ಸೇಠ್: (ಕಾರ್ಮಿಕ ಮತ್ತು ಹಜ್ ರಾಜ್ಯ ಸಚಿವರು): ಮಾನ್ಯ ಅಧ್ಯಕ್ಷರೆ,2005ನೇ ಸಾಲಿನ ಕೈಗಾರಿಕಾ ನಿಯೋಜನೆ (ಸ್ಥಾಯಿ ಆದೇಶಗಳು) (ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇವೆ.

ಅಧ್ಯಕ್ಷರು:– ವಿಧೇಯಕವನ್ನು ಮಂಡಿಸಲಾಗಿದೆ.

3. ಕೈಗಾರಿಕಾ ವಿವಾದಗಳ (ಕರ್ನಾಟಕ ತಿದ್ದುಪಡಿ) ವಿಧೇಯಕ, 2005

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ತನ್ವೀರ್ ಸೇಠ್: (ಕಾರ್ಮಿಕ ಮತ್ತು ಹಜ್ ರಾಜ್ಯ ಸಚಿವರು): ಮಾನ್ಯ ಅಧ್ಯಕ್ಷರೆ, 2005ನೇ ಸಾಲಿನ ಕೈಗಾರಿಕಾ ವಿವಾದಗಳ (ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುತ್ತೇವೆ.

ಅಧ್ಯಕ್ಷರು: ಪ್ರಸ್ತಾವ ಏನೆಂದರೆ,

"2005ನೇ ಸಾಲಿನ ಕೈಗಾರಿಕಾ ವಿವಾದಗಳ (ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ತನ್ವೀರ್ ಸೇಠ್: (ಕಾರ್ಮಿಕ ಮತ್ತು ಹಜ್ ರಾಜ್ಯ ಸಚಿವರು): ಮಾನ್ಯ ಅಧ್ಯಕ್ಷರೆ,2005ನೇ ಸಾಲಿನ ಕೈಗಾರಿಕಾ ವಿವಾದಗಳ (ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು: ವಿಧೇಯಕವನ್ನು ಮಂಡಿಸಲಾಗಿದೆ.

ಶ್ರೀ ಜಿ.ವಿ. ಶ್ರೀರಾಮರೆಡ್ಡಿ: ಮಾನ್ಯ ಅಧ್ಯಕ್ಷರೆ, ರೂಲ್ 69 ತೆಗೆದುಕೊಳ್ಳಿ.

ಅಧ್ಯಕ್ಷರು: ಮೂರು ಮುಕ್ಕಾಲು ಗಂಟೆಯಾಗಿದೆ. ಎಷ್ಟು ಗಂಟೆಯವರೆಗೆ ಸಭೆ ನಡೆಸುವುದು?

ಶ್ರೀ ಬಿ.ಎಸ್. ಯಡಿಯೂರಪ್ಪ: ನಮ್ಮ ಶಾಸಕಾಂಗ ಪಕ್ಷದ ಸಭೆ ಆರುವರೆ ಗಂಟೆಗೆ ಕರೆದಿದ್ದೇವೆ. ಇವತ್ತು 10 ಗಂಟೆಗೆ ನೀವು ಕರೆದಿದ್ದೀರಿ, ನಾವು ಬಂದಿದ್ದೇವೆ. ಆರು ಗಂಟೆಯವರೆಗೆ ನಡೆಸಿ ನಾವು ಕುಳಿತುಕೊಳ್ಳುವುದಕ್ಕೆ ಸಿದ್ಧರಿದ್ದೇವೆ. ಬಹಳ ಮುಖ್ಯವಾಗಿ ಶ್ರೀರಾಮರೆಡ್ಡಿಯವರು ಹೇಳಿದಂತೆ ಕೆಲವು ಪ್ರಮುಖವಾದ ವಿಷಯಗಳನ್ನು ಇವತ್ತು ನೀವು ತೆಗೆದುಕೊಂಡಿದ್ದೀರಿ. ನಿನ್ನೆ ದಿವಸ ನಿಯಮ 69ರಲ್ಲಿ ಬಂದಾಗ ಬಹಳ ಮುಖ್ಯವಾದುದು ಭೀಮಾನದಿ ಸಂಪೂರ್ಣ ಬತ್ತಿ